ದಿನಾಂಕಃ 12-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ** ಪ್ರತಿವಾದಿ ಪರ ವಕೀಲರಿಂದ,

ಸಾಕ್ಷಿಯು ತನ್ನ ಮುಖ್ಯ ವಿಚಾರಣೆಯ ಪ್ರತಿಜ್ಞಾಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯವೆಲ್ಲಾ ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದೆಂದು ಪ್ರಮಾಣಿಸಿ ಹೇಳಿರುತ್ತಾರೆ.

**ಪಾಟೀ ಸವಾಲುಃ** ವಾದಿ ಪರ ವಕೀಲರಿಂದ

1) ವಾದಿ ನನಗೆ ಪರಿಚಯ ಇರುತ್ತಾರೆ. ನನಗೆ ಆಂಗ್ಲ ಭಾಷೆ ಓದಲು ಬರುವುದಿಲ್ಲ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ವಾದಿ ಮತ್ತು ಪ್ರತಿವಾದಿಗಳ ನಡುವೆ ದಿನಾಂಕ 20.09.2021 ರಂದು ಆಗಿರುವ ಕ್ರಯದ ಕರಾರು ಪತ್ರದ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನನ್ನ ಸಾಕ್ಷಿ ಆಗಿ 2 ನೇ ಪ್ರತಿವಾದಿ ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿ. ದಾವಾ ಸ್ವತ್ತಿನ ಪಕ್ಕದಲ್ಲಿ ನನ್ನ ಜಮೀನು ಇರುತ್ತದೆ. ನನಗೆ ಸೇರಿದ ಆಸ್ತಿಯ ಸರ್ವೆ ನಂಬರ 343 ಆಗಿರುತ್ತದೆ. ನನಗೆ ಈ ದಾವೆಯ ಬಗ್ಗೆ ಮಾಹಿತಿ ಇರುವುದಿಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ